ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು, (ವಿವರ ನೀಡುವುದು)

ಇ) ಯಾವ ಕಾಲಮಿತಿಯೊಳಗೆ ರೂ. 1.00 ಲಕ್ಷಗಳನ್ನು ಬಿಡುಗಡೆ ಮಾಡಲಾಗುವುದು?

ಶ್ರೀಮತಿ ಉಮಾಶ್ರೀ (ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ವಿಕಲಚೇತನರ ಮತ್ತು ಹಿರಿಯ ನಾಗರಿಕ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

ಅ) ಬಂದಿರುವುದಿಲ್ಲ.

ಆ) ಕನ್ನಡ ಸಾಹಿತ್ಯ ಪರಿಷತ್ತು, ಬೆಂಗಳೂರು ವತಿಯಿಂದ ಏರ್ಪಡಿಸುವ ಅಖಿಲ ಭಾರತ ಸಾಹಿತ್ಯ ಸಮ್ಮೇಳನ, ಜಿಲ್ಲಾ/ತಾಲ್ಲೂಕು ಸಮ್ಮೇಳನಗಳಿಗೆ 2014–15ನೇ ಸಾಲಿನಲ್ಲಿ ರೂ. 500.00 ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ.

ಇ) ಕನ್ನಡ ಸಾಹಿತ್ಯ ಪರಿಷತ್ತಿಗೆ ಕ್ರಮ ಕೈಗೊಳ್ಳಲು ತಿಳಿಸಲಾಗುವುದು.

ಯಾತ್ರಿನಿವಾಸ್ ಮಂಜೂರಾತಿ

250(298); ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ)

ಅ) ತುಮಕೂರು ಜಿಲ್ಲೆ ಮಧುಗಿರಿ ಪಟ್ಟಣದಲ್ಲಿ ಪುರಾತನ ಹಾಗೂ ಬೃಹತ್ ಎತ್ತರದ ಏಕಶಿಲಾ ಬೆಟ್ಟವಿದ್ದು, ಇಲ್ಲಿಗೆ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಬಂದು ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಪ್ರವಾಸಿಗರ ಅನುಕೂಲಕ್ಕಾಗಿ 'ಯಾತ್ರಿನಿವಾಸ್' ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ 'ಯಾತ್ರಿನಿವಾಸ'ವನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳಲಾಗುವುದು? (ವಿವರ ನೀಡುವುದು)

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು)

ಅ) ಹೌದು

ಆ) ಇಲ್ಲ

ಇ) ಮಧುಗಿರಿ ಪಟ್ಟಣದ ಬಳಿ ಇರುವ ಏಕಶಿಲಾ ಬೆಟ್ಟ ಪ್ರದೇಶದಲ್ಲಿ ರೂ. 50.00 ಲಕ್ಷಗಳ ಅಂದಾಜು ವೆಚ್ಚದಲ್ಲಿ ಮೂಲಸೌಲಭ್ಯಗಳನ್ನು ಅಭಿವೃದ್ಧಿಪಡಿಸಲು ಉದ್ದೇಶಿಸಲಾಗಿದೆ. ಈ ಪ್ರದೇಶವು ಕೇಂದ್ರ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ವ್ಯಾಪ್ತಿಯಲ್ಲಿ ಬರುವುದರಿಂದ ಸದರಿ ಇಲಾಖೆಯ ಪೂರ್ವಾನುಮತಿ ಪಡೆದು ಅಗತ್ಯ ಸೌಲಭ್ಯಗಳನ್ನು ಒದಗಿಸಬೇಕಾಗುತ್ತದೆ. ಅಲ್ಲಿ ಯಾವ ರೀತಿಯ ಸೌಲಭ್ಯಗಳನ್ನು ಕಲ್ಪಿಸಬಹುದು ಎಂಬ ಬಗ್ಗೆ ಸದರಿ ಇಲಾಖೆಯ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಸೌಲಭ್ಯಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗುವುದು.

ಕಲಾವಿದರು ಮತ್ತು ಸಾಹಿತಿಗಳಿಗೆ ಮಾಸಾಶನ

254(302); ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ)

ಅ) ರಾಜ್ಯದಲ್ಲಿ ಕಲಾವಿದರು ಮತ್ತು ಸಾಹಿತಿಗಳಿಗೆ ನೀಡುತ್ತಿರುವ ಮಾಸಾಶನದ ಮೊತ್ತವೆಷ್ಟು;

ಆ) ಈಗಾಗಲೇ ಮಾಸಾಶನ ಪಡೆಯುತ್ತಿರುವ ಕಲಾವಿದರು ಮತ್ತು ಸಾಹಿತಿಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)